**All India Radio: Bangalore**
**Regional Bulletin In Kannada**
**06.03.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.03.2025 / 6.40 p.m.**
*********************

ಮುಖ್ಯಾಂಶಗಳು

೧.    ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ನಾಳೆ ೨೦೨೫-೨೬ನೇ ಸಾಲಿನ ಆಯವ್ಯಯ ಮಂಡನೆ

೨.    ವಿಧಾನಸಭೆಯಲ್ಲಿಂದು ಸಣ್ಣ ಹಣಕಾಸು ಸಂಸ್ಥೆಗಳಿಂದ ಕಿರುಕುಳ ತಡೆಯುವ ವಿಧೇಯಕ ಮಂಡನೆ

೩.    ಮಂಗನ ಕಾಯಿಲೆಗೆ ಮುಂದಿನ ವರ್ಷ ಲಸಿಕೆ ಲಭ್ಯವಾಗುವ ನಿರೀಕ್ಷೆ - ಸಚಿವ ದಿನೇಶ್ ಗುಂಡೂರಾವ್

೪.    ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ಐದು ಕೋಟಿ ರೂಪಾಯಿಗಳಿಗೆ ಹೆಚ್ಚಿಸುವಂತೆ ಮುಖ್ಯಮಂತ್ರಿಗಳಿಗೆ ಬಿಜೆಪಿ-ಜೆಡಿಎಸ್ ನಿಯೋಗ ಮನವಿ

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ೨೦೨೫-೨೬ನೇ ಸಾಲಿನ ಬಜೆಟ್ ಮಂಡಿಸಲಿದ್ದಾರೆ. ಇದು ಅವರು ಮಂಡಿಸುತ್ತಿರುವ ೧೬ನೇ ಆಯವ್ಯಯವಾಗಿದೆ.

ನಾಳೆ ಬೆಳಗ್ಗೆ ೧೦ ಗಂಟೆ ೧೫ ನಿಮಿಷಕ್ಕೆ ಬಜೆಟ್ ಮಂಡಿಸಲಿದ್ದು, ರಾಜ್ಯದ ಹಣಕಾಸು ಸಚಿವರಾಗಿ ಅತಿಹೆಚ್ಚು ಬಜೆಟ್ ಮಂಡಿಸಿದ ಕೀರ್ತಿಗೆ ಭಾಜನರಾಗಲಿದ್ದಾರೆ.

ಈ ಬಾರಿಯ ಬಜೆಟ್‌ನಲ್ಲಿ ಕೃಷಿ, ಆರೋಗ್ಯ, ಶಿಕ್ಷಣಕ್ಕೆ ಒತ್ತು ನೀಡಲಾಗುವುದು ಎಂದು ಸಾಮಾಜಿಕ ಜಾಲತಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬಜೆಟ್ ಕುರಿತ ಸಂಪೂರ್ಣ ಮಾಹಿತಿ ನಾಳೆ ಮಧ್ಯಾಹ್ನ ೨:೩೦ ರ ಪ್ರದೇಶ ಸಮಾಚಾರ ಹಾಗೂ ಸಂಜೆ ೬:೪೦ ರ ಪ್ರದೇಶ ಸಮಾಚಾರದಲ್ಲಿ ಪ್ರಸಾರವಾಗಲಿದೆ. ನಾಳೆ ರಾತ್ರಿ ೮ರಿಂದ ೮-೩೦ರ ವರೆಗೆ ಬಜೆಟ್ ಕುರಿತ ವಿಶೇಷ ಸಂವಾದವೂ ಮೂಡಿಬರಲಿದೆ.

*****************

ಸಣ್ಣ ಹಣಕಾಸು ಸಂಸ್ಥೆಗಳಿಂದ ಕಿರುಕುಳ ತಡೆಯುವ ವಿಧೇಯಕವನ್ನು ವಿಧಾನಸಭೆಯಲ್ಲಿಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಮಂಡಿಸಿದ್ದಾರೆ.

ಸಣ್ಣ ಹಣಕಾಸು ಸಂಸ್ಥೆಗಳಿಂದ ಕಿರುಕುಳ ತಡೆ ಸಂಬಂಧ ರಾಜ್ಯ ಸರ್ಕಾರ ಈಗಾಗಲೇ ಸುಗ್ರಿವಾಜ್ಞೆ ಹೊರಡಿಸಿದೆ ಎಂದು ಇದೇ ವೇಳೆ ಸಚಿವರು ತಿಳಿಸಿದರು.

*****************

ಮಂಗನ ಕಾಯಿಲೆಗೆ ಮುಂದಿನ ವರ್ಷ ಲಸಿಕೆ ಸಿಗುವ ಸಾಧ್ಯತೆ ಇದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ.

ಬಿಜೆಪಿಯ ಅರಗ ಜ್ಞಾನೇಂದ್ರ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಮಂಗನ ಕಾಯಿಲೆಗೆ ಈ ಹಿಂದೆ ನೀಡಲಾಗುತ್ತಿದ್ದ ಲಸಿಕೆ ಪರಿಣಾಮಕಾರಿಯಾಗಿಲ್ಲ ಎನ್ನುವ ಕಾರಣಕ್ಕೆ ಆ ಲಸಿಕೆಯನ್ನು ಬಳಸುತ್ತಿಲ್ಲ. ಪರಿಣಾಮಕಾರಿಯಾದ ಹೊಸ ಲಸಿಕೆ ಬಗ್ಗೆ ಸಂಶೋಧನೆ ನಡೆದಿದ್ದು, ಮುಂದಿನ ವರ್ಷ ಹೊಸ ಲಸಿಕೆ ಲಭ್ಯವಾಗುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಆಯುಷ್ಮಾನ್ ಭಾರತ್ ಯೋಜನೆಗೆ ಸಂಬಂಧಿಸಿದಂತೆ ೭೦ ವರ್ಷ ಮೀರಿದವರಿಗೆ ವಯೋ ವಂದನಾ ಯೋಜನೆಯಡಿ ೫ ಲಕ್ಷ ರೂಪಾಯಿಗಳವರೆಗೆ ಉಚಿತ ಚಿಕಿತ್ಸೆ ಒದಗಿಸುವ ಯೋಜನೆಯನ್ನು ಜಾರಿ ಮಾಡುವ ಸಂಬಂಧ ಕೆಲವು ಸ್ಪಷ್ಟನೆಗಳನ್ನು ಕೋರಿ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಕೇಂದ್ರದಿಂದ ಉತ್ತರ ಬಂದ ನಂತರ ಈ ಯೋಜನೆಯನ್ನು ರಾಜ್ಯದಲ್ಲಿ ಜಾರಿ ಮಾಡಲಾಗುವುದು ಎಂದು ಅವರು ಭರವಸೆ ನೀಡಿದರು.

ಆಯುಷ್ಮಾನ್ ಭಾರತ್ ಯೋಜನೆಯಡಿ ಚಿಕಿತ್ಸೆ ನೀಡುವ ಆಸ್ಪತ್ರೆಗಳಿಗೆ ೩೦ ದಿನದಲ್ಲಿ ಹಣ ಪಾವತಿ ಮಾಡಲಾಗುತ್ತಿದೆ. ಹಣ ಪಾವತಿಯಲ್ಲಿ ಯಾವುದೇ ವಿಳಂಬವಾಗಿಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದರು.

*****************

ವಿಧಾನಸಭೆ ಹಾಗೂ ವಿಧಾನಪರಿಷತ್ ಕಲಾಪಗಳ ಕುರಿತ ಸಮಗ್ರ ಚಿತ್ರಣ ವಿಧಾನಮಂಡಲದಲ್ಲಿ ಇಂದು ವಿಶೇಷ ಸಂಚಿಕೆಯಲ್ಲಿ ೭ ಗಂಟೆ ೪೫ ನಿಮಿಷದಿಂದ ೮ ಗಂಟೆವರೆಗೆ ಮೂಡಿ ಬರಲಿದೆ.

*****************

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದ ಬಿಜೆಪಿ ಮತ್ತು ಜೆಡಿಎಸ್ ಶಾಸಕರ ನಿಯೋಗ, ವಿಧಾನಸೌಧದ ಕಚೇರಿಯಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿ ಹೆಚ್ಚಳಕ್ಕೆ ಮನವಿ ಸಲ್ಲಿಸಿತು.

ಕಳೆದ ೧೦ ವರ್ಷಗಳ ಹಿಂದೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ವಾರ್ಷಿಕ ೨ ಕೋಟಿ ರೂಪಾಯಿಗಳಿಗೆ ನಿಗದಿಪಡಿಸಲಾಗಿತ್ತು. ಪ್ರಸ್ತುತ ಸರ್ಕಾರದ ದರ ಪಟ್ಟಿಯಲ್ಲಿ ನಿಗದಿ ಪಡಿಸುವ ದರಗಳು, ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿರುವ ಕಾರಣ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ಐದು ಕೋಟಿ ರೂಪಾಯಿಗಳಿಗೆ ಹೆಚ್ಚಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಕ್ತ ನಿರ್ದೇಶನ ನೀಡುವಂತೆ ನಿಯೋಗ ಮನವಿ ಮಾಡಿತು.

*****************

ಮೈಸೂರು ಆಕಾಶವಾಣಿ ಕೇಂದ್ರವು ೯೦ ವಸಂತಗಳನ್ನು ಪೂರೈಸಿದೆ. ಇದರ ಅಂಗವಾಗಿ ಪ್ರಸಾರ ಭಾರತಿ ಸಹಕಾರದೊಂದಿಗೆ ನಾಳೆ ಮೈಸೂರಿನ ಆಕಾಶವಾಣಿ ಕೇಂದ್ರದ ಆವರಣದಲ್ಲಿ 'ನುಡಿ ನಾದ ಸಂಗಮ' ವಿಶೇಷ ಕಾರ್ಯಕ್ರಮ ನಡೆಯಲಿದೆ.

ನವದೆಹಲಿಯ ಆಕಾಶವಾಣಿ ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ. ಪ್ರಜ್ಞಾ ಪಾಲೀವಾಲ್ ಗೌರ್ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಇದಕ್ಕೂ ಮುನ್ನ ನಾಳೆ ಬೆಳಗ್ಗೆ ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ ಆಕಾಶವಾಣಿ ಕಚೇರಿಯವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿದೆ.

*****************

ಚಿಕ್ಕಬಳ್ಳಾಪುರ ನಗರದ ಮೂಲಕ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ೬೯ ಹಾಗೂ ಮುಂದಿನ ದಿನಗಳಲ್ಲಿ ಬರಲಿರುವ ಎರಡು ರೈಲ್ವೆ ಮಾರ್ಗಗಳಿಗೆ ಸರ್ಕಾರಿ ಜಮೀನಿನ ಜೊತೆಗೆ ಖಾಸಗಿ ಜಮೀನನ್ನೂ ಭೂಸ್ವಾಧೀನ ಮಾಡಿಕೊಳ್ಳುವ ಅಗತ್ಯವಿದೆ ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ನಗರದ ಶಿಡ್ಲಘಟ್ಟ ರಸ್ತೆಯಲ್ಲಿ ರಾಷ್ಟ್ರೀಯ ಹೆದ್ದಾರಿ ೬೯ ರ ಅಭಿವೃದ್ಧಿ ಮತ್ತು ರೈಲ್ವೆ ಮಾರ್ಗಕ್ಕೆ ಅಗತ್ಯವಿರುವ ಭೂಮಿಯನ್ನು ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿ, ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಭೂಸ್ವಾಧೀನ ಸಂಬಂಧ ಜಿಲ್ಲಾಧಿಕಾರಿ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಿ, ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು. ಮಂಚೇನಹಳ್ಳಿಯಿಂದ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಚೇರಿವರೆಗೆ ರಾಷ್ಟ್ರೀಯ ಹೆದ್ದಾರಿ ೬೯ ರ ಅಭಿವೃದ್ಧಿ ೩೩೦ ಕೋಟಿ ರೂಪಾಯಿ ವೆಚ್ಚದಲ್ಲಿ ಪ್ರಗತಿಯಲ್ಲಿದೆ ಎಂದರು.

ಈಗಾಗಲೇ ಮಂಜೂರಾಗಿರುವ ಎರಡು ರೈಲ್ವೆ ಯೋಜನೆಗಳ ಮಾರ್ಗಗಳು ಚಿಕ್ಕಬಳ್ಳಾಪುರ ನಗರದ ಮೂಲಕ ಹಾದು ಹೋಗಲಿವೆ. ದೇವನಹಳ್ಳಿ-ಬಂಗಾರಪೇಟೆ ಹಾಗೂ ಆವತಿ ಟರ್ಮಿನಲ್‌ಗಳ ಕಾಮಗಾರಿಗೆ ಅಗತ್ಯವಿರುವ ಭೂಮಿಗಾಗಿ ಒತ್ತುವರಿ ತೆರವು ಮತ್ತು ಖಾಸಗಿ ಭೂಮಿಯ ಭೂಸ್ವಾಧೀನದ ಪ್ರಕ್ರಿಯೆಗಳಿಗೆ ಶೀಘ್ರವೇ ಚಾಲನೆ ದೊರೆಯಲಿದೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದರು.

ಧ್ವನಿ: ಡಾ.ಕೆ.ಸುಧಾಕರ್ ೩೨ ಸೆಕೆಂಡ್

*****************

ರಾಜ್ಯ ಕಾಂಗ್ರೆಸ್ ಸರ್ಕಾರ ಸಮರ್ಪಕ ಆಡಳಿತ ನಡೆಸಲು ವಿಫಲವಾಗಿದೆ ಎಂದು ಆರೋಪಿಸಿ, ಹಾಸನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಿಲ್ಲಾ ಜೆಡಿಎಸ್ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ನೀಡಿರುವ ಹಲವು ಬೇಡಿಕೆಗಳನ್ನು ಈವರೆಗೆ ಈಡೇರಿಸಿಲ್ಲ. ಅನ್ನ ಭಾಗ್ಯ, ಗೃಹ ಲಕ್ಷ್ಮಿ, ಗೃಹ ಜ್ಯೋತಿ ಸೇರಿದಂತೆ ಹಲವು ಭರವಸೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಲ್ಲ. ಶಕ್ತಿ ಯೋಜನೆಯಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗಿದೆ ಎಂದು ದೂರಿದರು.

ಹಾಲಿಗೆ ಪ್ರೋತ್ಸಾಹ ಧನ ನೀಡಿಲ್ಲ. ಜಿಲ್ಲೆಯಲ್ಲಿ ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ ಕೈಗೊಂಡಿಲ್ಲ. ಅಲ್ಲದೇ ಕರಡಿ, ಚಿರತೆ ಸೇರಿದಂತೆ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದೆ. ಹಾಸನ ವಿಶ್ವವಿದ್ಯಾಲಯವನ್ನು ಮುಚ್ಚಲು ಸರ್ಕಾರ ಮುಂದಾಗಿದೆ ಎಂದು ಅವರು ಆರೋಪಿಸಿದರು.

ರಾಜ್ಯ ಸರ್ಕಾರದ ವೈಫಲ್ಯಗಳನ್ನು ಖಂಡಿಸಿ, ನಾಳೆ ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಬೃಹತ್ ಮೆರವಣಿಗೆ ನಡೆಸಿ, ಬಳಿಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಕೆ.ಎಸ್.ಲಿಂಗೇಶ್ ಹೇಳಿದರು.

*****************

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಮನಗರ ಜಿಲ್ಲೆಯ ರೈತರಿಂದ ರಾಗಿ ಖರೀದಿಸಲು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಖರೀದಿ ಕೇಂದ್ರವನ್ನು ಆರಂಭಿಸಲಾಗಿದ್ದು, ಜಿಲ್ಲೆಯ ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ತಿಳಿಸಿದ್ದಾರೆ.

ರಾಮನಗರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೋಂದಾಯಿತ ರೈತರಿಂದ ರಾಗಿ ಖರೀದಿಗೆ ಮಾರ್ಚ್ ೦೧ ರಿಂದ ಚಾಲನೆ ನೀಡಲಾಗಿದ್ದು, ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ಎಂದರು.

ಪ್ರತಿ ರೈತರಿಂದ ಗರಿಷ್ಠ ೨೦ ಕ್ವಿಂಟಾಲ್ ರಾಗಿಯನ್ನು ಖರೀದಿಸಲಾಗುವುದು. ಖರೀದಿ ಕೇಂದ್ರಗಳಲ್ಲಿ ರೈತರನ್ನು ಹೊರತುಪಡಿಸಿ, ದಲ್ಲಾಳಿ ಅಥವಾ ಮಧ್ಯವರ್ತಿಗಳಿಗೆ ಅವಕಾಶವಿರುವುದಿಲ್ಲ. ಒಂದು ವೇಳೆ ಕಂಡುಬಂದಲ್ಲಿ ಅವರ ವಿರುದ್ಧ ಕಾನೂನು ರೀತಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

*****************

ಪ್ರತಿ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಬದುಕುವ ಹಕ್ಕು, ವಿಕಾಸ ಹೊಂದುವ ಹಕ್ಕು, ಭಾಗವಹಿಸುವ ಹಕ್ಕು, ರಕ್ಷಣೆ ಹಕ್ಕು ಪ್ರಮುಖ ಅಂಶಗಳಾಗಿವೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಮಕ್ಕಳ ಹಕ್ಕುಗಳ ಕಾಯ್ದೆ ಅನುಷ್ಠಾನದ ಕುರಿತ ಪ್ರಗತಿ ಪರಿಶೀಲನಾ ಸಭೆ ಮತ್ತು ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳ ಮೇಲಿನ ದೌರ್ಜನ್ಯ ಶಿಕ್ಷಾರ್ಹ ಅಪರಾಧವಾಗಿದೆ. ಈ ದಿಸೆಯಲ್ಲಿ ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ ಆಗಿದೆ ಎಂದರು.

ಬಾಲ್ಯ ವಿವಾಹ, ಭಿಕ್ಷಾಟನೆ, ಮಕ್ಕಳ ಮಾರಾಟ, ಲೈಂಗಿಕ ದೌರ್ಜನ್ಯ, ಬಾಲ ಕಾರ್ಮಿಕ ಪದ್ಧತಿ ಕಂಡುಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ ೧೦೯೮ ಅಥವಾ ಪೊಲೀಸ್ ಸಹಾಯವಾಣಿ ಸಂಖ್ಯೆ ೧೧೨ ಕ್ಕೆ ಉಚಿತ ಕರೆ ಮಾಡಿ ದೂರು ನೀಡಬಹುದಾಗಿದೆ. ಶಾಲೆಗಳಲ್ಲಿ ಪೊಲೀಸ್ ಸಹಾಯವಾಣಿ ಸಂಖ್ಯೆ ೧೧೨ ಅನ್ನು ಕಾಡ್ಡಾಯವಾಗಿ ಪ್ರದರ್ಶಿಸಬೇಕು. ಜೊತೆಗೆ ದೂರು ಪೆಟ್ಟಿಗೆಯನ್ನು ಇರಿಸುವಂತೆ ಅವರು ಸೂಚಿಸಿದರು.

********ಮುಕ್ತಾಯ********